# ಮೈಸೂರು ವಿಶ್ವವಿದ್ಯಾನಿಲಯ

Estd-1916

(Re-accredited by NAAC with CGPA 3.47 on four point scale with A grade)

ಸಂಖ್ಯೆ: ಪ.ವಿ.8.1/PGB/75/2009-10

ಕುಲಸಚಿವ (ಪರೀಕ್ಷಾಂಗ)ರವರ ಕಛೇರಿ
ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು-570 005
ದಿನಾಂಕ: 02-08-2021

## ಅಧಿಸೂಚನೆ

ವಿಷಯ: ಆಗಸ್ಟ್ 2021ರ ಮಾಹೆಯಲ್ಲಿ ನಡೆಯಲಿರುವ ಪ್ರಥಮ ಸೆಮಿಸ್ಟರ್ ಎಂ.ಬಿ.ಎ ಸ್ನಾತಕೋತ್ತರ ಪದವಿ ಪರೀಕ್ಷೆಗೆ ಶುಲ್ಕ ಪಾವತಿ ಮಾಡುವ ಮತ್ತು ಅಭ್ಯರ್ಥನಾ ಪತ್ರ ಸಲ್ಲಿಸುವ ಬಗ್ಗೆ.

ಉಲ್ಲೇಖ: ವಿ.ವಿ.ಟಿಪ್ಪಣಿ ಸಂಖ್ಯೆ:ಎ.ಸಿ.7(ಎ)/456/2016-17, ದಿನಾಂಕ: 30-07-2021

*****

ಆಗಸ್ಟ್ 2021ರ ಮಾಹೆಯಲ್ಲಿ ನಡೆಯಲಿರುವ ಪ್ರಥಮ ಸೆಮಿಸ್ಟರ್ ಸ್ನಾತಕೋತ್ತರ ಪದವಿ ಪರೀಕ್ಷೆಗಳಿಗೆ ಪರೀಕ್ಷಾ ಶುಲ್ಕ ಪಾವತಿಸಲು ಈ ಕೆಳಕಂಡ ವೇಳಾಪಟ್ಟಿಯನ್ನು ಪ್ರಕಟಿಸಲಾಗಿದೆ.

| | | |
|---|---|---|
| 1 | ಪರೀಕ್ಷೆಗಳು ಪ್ರಾರಂಭವಾಗುವ ದಿನಾಂಕ | 23-08-2021 |
| 2 | ಪರೀಕ್ಷಾ ಶುಲ್ಕ ಪಾವತಿಸಲು ಹಾಗೂ ಪರೀಕ್ಷಾ ಅರ್ಜಿ ಪತ್ರವನ್ನು ಸಲ್ಲಿಸಲು ಕೊನೆಯ ದಿನಾಂಕ | 11-08-2021 |
| 3 | ವೇಳಾಪಟ್ಟಿ ಮತ್ತು ಪ್ರಶ್ನೆ ಪತ್ರಿಕೆ ಬೇಡಿಕೆ ಪಟ್ಟಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ | 12-08-2021 |
| 4 | ಪರೀಕ್ಷಾ ಅರ್ಜಿಗಳು, ಪ್ರವೇಶ ಪತ್ರಗಳು, ಅಭ್ಯರ್ಥನ ಪಟ್ಟಿಗಳನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ | 18-08-2021 |

<u>ಪರೀಕ್ಷಾ ಶುಲ್ಕಗಳ ವಿವರಗಳು :</u>

**I M.B.A. Course :**
- a) Whole Exam (Per Sem/Exam) — ₹ **2,200/-**
- b) Per Paper — ₹ **570/-**

**II Marks Card Fee (Per Year/Semester)** — ₹ **320/-**

ವಿ.ವಿ.ಆದೇಶ ಸಂಖ್ಯೆ:ಎಸಿ.2(ಎಸ್)/122/04-05, ದಿನಾಂಕ: 04-02-2005ರ ಪ್ರಕಾರ ಎಲ್ಲಾ ಪದವಿ ಕೋರ್ಸ್‌ಗಳಿಗೆ ವಿದ್ಯಾರ್ಥಿಗಳು ಪ್ರತ್ಯೇಕ-ಪ್ರತ್ಯೇಕವಾಗಿ ಪತ್ರಿಕೆಗಳ ಪರೀಕ್ಷೆ ತೆಗೆದುಕೊಂಡಲ್ಲಿ ಪಾವತಿಸಬೇಕಾದ ಗರಿಷ್ಠ ಪರೀಕ್ಷಾ ಶುಲ್ಕವು ಆಯಾಯ ವರ್ಷಕ್ಕೆ ವಿಷಯವಾರು ನಿಗದಿಗೊಳಸಲಾಗಿರುವ ಪೂರ್ಣ ಪರೀಕ್ಷಾ ಶುಲ್ಕಕ್ಕೆ (Whole examination fee) ಸಮಾನವಾಗಿರುತ್ತದೆಂದು ಈ ಮೂಲಕ ಸ್ಪಷ್ಟಪಡಿಸಲಾಗಿದೆ.

**ಸೂಚನೆಗಳು:**

1. ಪರೀಕ್ಷಾ ಶುಲ್ಕವನ್ನು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ವಿಶ್ವವಿದ್ಯಾನಿಲಯ, ಶಾಖೆ, ಮೈಸೂರು ಇಲ್ಲಿ ವಿಶ್ವವಿದ್ಯಾನಿಲಯದ ಪರೀಕ್ಷಾ ಖಾತೆಗೆ ಜಮಾ ಆಗುವಂತೆ ಪಾವತಿಸಬೇಕು.
2. ದಿನಾಂಕ:23-08-2021 ರಿಂದ ದಿನಾಂಕ:31-08-2021ರವರೆಗೆ ಬೆಳಗ್ಗೆ 10:00 ಗಂಟೆಯಿಂದ ಮಧ್ಯಾಹ್ನ 1:00 ಗಂಟೆಯವರೆಗೆ ಇರುವಂತೆ ವೇಳಾಪಟ್ಟಿಯನ್ನು ಸಿದ್ಧಪಡಿಸಿ 05 ಪ್ರತಿಗಳನ್ನು ಅನುಮೋದನೆಗೆ ಕಳುಹಿಸುವುದು. ವೇಳಾಪಟ್ಟಿಯಲ್ಲಿ ಸರಿಯಾದ **Question Paper Code** ಮತ್ತು **Title** ಅನ್ನು ನಮೂದಿಸುವುದು.
3. ಅನುತ್ತೀರ್ಣ ವಿದ್ಯಾರ್ಥಿಗಳು ಲಿಖಿತ ಪರೀಕ್ಷೆಯ ಜೊತೆ ಮೌಖಿಕ ಇತ್ಯಾದಿ ಪರೀಕ್ಷೆಗಳನ್ನೂ ಸಹ ಸಂಬಂಧಿಸಿದ ಪಠ್ಯಕ್ರಮದಲ್ಲಿ ನಿಗದಿಯಾಗಿರುವಂತೆ ತೆಗೆದುಕೊಳ್ಳಬೇಕು.
4. ವಿದ್ಯಾರ್ಥಿಯು ಪರೀಕ್ಷೆಗೆ ಹಾಜರಾಗಲು ಅರ್ಹತೆಗೆ ಸಂಬಂಧಿಸಿದ ನಿಯಮಗಳ/ನಿಬಂಧನೆಗಳನ್ನು ಪೂರೈಸದ ವಿದ್ಯಾರ್ಥಿಗಳು ಕೇವಲ ಪರೀಕ್ಷಾ ಶುಲ್ಕ ಪಾವತಿ ಮಾಡಿ ಪರೀಕ್ಷೆಯ ಅಭ್ಯರ್ಥನ ಪತ್ರ ಸಲ್ಲಿಸಿದ ಮಾತ್ರಕ್ಕೆ ಅರ್ಹರಾಗುವುದಿಲ್ಲ.
5. ಸುತ್ತೋಲೆ ಸಂಖ್ಯೆ: ವಿಘ/1/9/2013-14, ದಿನಾಂಕ: 25-09-2013 ಪ್ರಕಾರ 2013-14ನೇ ಶೈಕ್ಷಣಿಕ ಸಾಲಿನಲ್ಲಿ ಸ್ನಾತಕೋತ್ತರ/ಡಿಪ್ಲೋಮ/ಕೋರ್ಸ್‌ಗಳಲ್ಲಿ ಪ್ರವೇಶಾತಿ ಪಡೆದಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ವರಮಾನ 2.5 ಲಕ್ಷದೊಳಗಿರುವ ವಿದ್ಯಾರ್ಥಿಗಳಿಂದ ಪ್ರವೇಶಾತಿ ಶುಲ್ಕ, ಬೋಧನಾ ಶುಲ್ಕ, ಪರೀಕ್ಷಾ ಶುಲ್ಕ, ಅಂಕಪಟ್ಟಿ ಶುಲ್ಕ ಮತ್ತು ಅಂತಿಮ ಪದವಿ ಪ್ರಮಾಣ ಪತ್ರದ ಶುಲ್ಕಗಳನ್ನು ಕಟ್ಟಿಸಿಕೊಳ್ಳಬಾರದೆಂದು ಸರ್ಕಾರದ ಆದೇಶವಿರುತ್ತದೆ. ಇದರಂತೆ ಕ್ರಮತೆಗೆದುಕೊಳ್ಳುವುದು.
6. ಪ್ರವರ್ಗ-1 ಮತ್ತು ಪರೀಕ್ಷಾ ಶುಲ್ಕ ಪಾವತಿಯಿಂದ ವಿನಾಯಿತಿ ಪಡೆಯಲು ಅರ್ಹರಾದ ಇತರೆ ವರ್ಗಗಳಿಗೆ (ಸಾಮಾನ್ಯ ವರ್ಗದವರನ್ನು ಒಳಗೊಂಡಂತೆ) ಸೇರಿದ ಅಭ್ಯರ್ಥಿಗಳಿಗೆ ಅವರ ಪೋಷಕರ ವಾರ್ಷಿಕ ವರಮಾನದ ಆಧಾರದ ಮೇಲೆ ಪರೀಕ್ಷಾ ಶುಲ್ಕ ಪಾವತಿಯಿಂದ ವಿನಾಯಿತಿ ನೀಡಲಾಗಿದೆ. ಆದರೂ, ಅಂತಹ ಅಭ್ಯರ್ಥಿಗಳು ನಿಗದಿಪಡಿಸಿದಂತೆ, ಅಂಕಪಟ್ಟಿ ಶುಲ್ಕ ರೂ. 320/-ಗಳನ್ನು ಪಾವತಿ ಮಾಡಬೇಕು.
7. ಪರಿಶಿಷ್ಠ ಜಾತಿ/ಪರಿಶಿಷ್ಠ ವರ್ಗದ ವಿದ್ಯಾರ್ಥಿಗಳು ಅವರ ಪೋಷಕರ ಆದಾಯ ರೂ.2.5 ಲಕ್ಷಗಳು ಮೀರಿದಲ್ಲಿ ಅವರುಗಳಿಂದ ಪೂರ್ಣ ಪರೀಕ್ಷಾ ಶುಲ್ಕ ಸಂಗ್ರಹಿಸುವುದು.
8. ಕ್ರ.ಸಂ.ಎ.ಸಿ.2/182/92-93, ದಿನಾಂಕ: 02-03-2000ರ ಕುಲಸಚಿವರ ಪತ್ರದಲ್ಲಿ ತಿಳಸಿರುವ ರೀತ್ಯಾ ಪರಿಶಿಷ್ಠ ಜಾತಿ/ಪರಿಶಿಷ್ಠ ವರ್ಗ ಹಾಗೂ ಕ್ಯಾಟಗರಿ-1ರ ವರ್ಗದ ವಿದ್ಯಾರ್ಥಿಗಳು ಸದರಿ ಕೋರ್ಸನ್ನು ಮುಗಿಸಿದ ನಂತರ ರಿಪೀಟರ್ಸ್ ಆಗಿ ಪರೀಕ್ಷೆಗಳನ್ನು ತೆಗೆದುಕೊಂಡಲ್ಲಿ ಅಂತಹ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕ ಮತ್ತು ಅಂಕಪಟ್ಟಿ ಶುಲ್ಕಗಳನ್ನು ತಪ್ಪದೆ ವಸೂಲು ಮಾಡಬೇಕೆಂದು ತಿಳಸಲಾಗಿದೆ.
9. ಒಮ್ಮೆ ಪಾವತಿ ಮಾಡಿದ ಪರೀಕ್ಷಾ ಶುಲ್ಕವನ್ನು ಯಾವುದೇ ಸಂದರ್ಭದಲ್ಲಿಯೇ ಆಗಲಿ ಮರುಪಾವತಿ ಮಾಡಲಾಗುವುದಿಲ್ಲ ಅಥವಾ ಮುಂದಿನ ಪರೀಕ್ಷೆಗೆ ಹೊಂದಾಣಿಕೆ ಮಾಡಲಾಗುವುದಿಲ್ಲ.
10. ವಿಶ್ವವಿದ್ಯಾನಿಲಯದಿಂದ ವಿದ್ಯಾರ್ಥಿಗಳ ಪ್ರವೇಶ ಅನುಮೋದನೆ ಪಡೆದಿರುವ ಬಗೆಗೆ ಮುಖ್ಯಸ್ಥರು ಅಭ್ಯರ್ಥನ ಪಟ್ಟಿಯಲ್ಲಿ ದೃಢೀಕರಿಸಬೇಕು.
11. ಸ್ನಾತಕೋತ್ತರ ಪದವಿ ಶೈಕ್ಷಣಿಕ ವರ್ಷದಲ್ಲಿ ನಿಬಂಧನೆಗಳಿಗನುಸಾರವಾಗಿ ಹಾಜರಾತಿ ಕೊರತೆ ಇರುವ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ಪರೀಕ್ಷೆಗಳನ್ನು ತೆಗೆದುಕೊಳ್ಳಲು ಅನುಮತಿ ನೀಡಲಾಗುವುದಿಲ್ಲ.
12. ಪರೀಕ್ಷೆಯ ಒಂದು ಭಾಗವಾಗಿರುವ ಮಹಾನಿಬಂಧ/ಪ್ರೌಢ ಪ್ರಬಂಧ/ಪ್ರಾಜೆಕ್ಟ್ ಕಾರ್ಯ/ಕ್ಷೇತ್ರಕಾರ್ಯ ವರದಿ ಇತ್ಯಾದಿಗಳನ್ನು ನಿರ್ದಿಷ್ಟ ವಿಷಯದಲ್ಲಿನ ಲಿಖಿತ ಪರೀಕ್ಷೆಯ ಕೊನೆಯ ದಿನಾಂಕದಂದು ಅಥವಾ ಅದಕ್ಕಿಂತ ಮುಂಚಿತವಾಗಿ ಅಧ್ಯಯನ ವಿಭಾಗಗಳ ಸಂಬಂಧಪಟ್ಟ ಅಧ್ಯಕ್ಷರು/ಮುಖ್ಯಸ್ಥರಿಗೆ ದ್ವಿಪ್ರತಿಗಳಲ್ಲಿ ಸಲ್ಲಿಸಬೇಕು. ಪ್ರೌಢಪ್ರಬಂಧದಲ್ಲಿ ವಿದ್ಯಾರ್ಥಿಯ ಹೆಸರು ಮತ್ತು ನೋಂದಣಿ ಸಂಖ್ಯೆಯನ್ನು ತಪ್ಪದೆ ನಮೂದಿಸುವುದು.

**ವಿಶೇಷ ಸೂಚನೆ:**

1. ಪಠ್ಯಕ್ರಮದಲ್ಲಿ ಅಥವಾ ಪರೀಕ್ಷೆಗೆ ಸಂಬಂಧಿಸಿದ ಯಾವುದೇ ರೀತಿಯ ಬದಲಾವಣೆಯಿದ್ದಲ್ಲಿ ಸದರಿ ವಿಭಾಗದ ಅಧ್ಯಕ್ಷರು ಬದಲಾವಣೆಯ ವಿವರಗಳೊಂದಿಗೆ ಕಂಪ್ಯೂಟರ್ ವಿಭಾಗದ ಮುಖ್ಯಸ್ಥರನ್ನು ಭೇಟಿಯಾಗಬೇಕೆಂದು ಕೋರಲಾಗಿದೆ.
2. ಪರೀಕ್ಷೆಗಳಿಗೆ **Bar Coded/OMR** ಉತ್ತರ ಪತ್ರಿಕೆಗಳನ್ನು ಉಪಯೋಗಿಸಬೇಕು. ಇದಕ್ಕೆ ಪೂರಕವಾಗಿ ಪ್ರತಿ ವಿದ್ಯಾರ್ಥಿಗೆ **Student ID** ಯನ್ನು ಹಾಗೂ ಪ್ರತಿ ಪ್ರಶ್ನೆ ಪತ್ರಿಕೆಗೆ **Question Paper Code** ಅನ್ನು

ನೀಡಲಾಗಿದೆ. **Student ID** ಮತ್ತು **Question Paper Code** ಗಳ ಮಾಹಿತಿ ಬೇಕಾದಲ್ಲಿ ಪರೀಕ್ಷಾ ವಿಭಾಗದ ಗಣಕ ಕೇಂದ್ರದಿಂದ ಪಡೆಯಬೇಕು.

3. ಪರೀಕ್ಷಾ ಅರ್ಜಿಯ ಖಾಲಿ ಫಾರಂಗಳನ್ನು ನೀಡಲಾಗುವುದು. ಈ ಅರ್ಜಿಗಳನ್ನು ವಿದ್ಯಾರ್ಥಿಗಳಿಗೆ ವಿತರಿಸಿ ಅವರಿಂದ ಮಾಹಿತಿ ಪಡೆದು **Online** ಮೂಲಕ ಸಲ್ಲಿಸಬೇಕು. **Online**ನಲ್ಲಿ ಪ್ರವೇಶ ಪತ್ರ ಪಡೆದು ಅಭ್ಯರ್ಥನಾ ಪಟ್ಟಿಯ ಜೊತೆಯಲ್ಲಿ ಪ್ರವೇಶ ಪತ್ರ ಅನುಮೋದನೆಗೆ ಪರೀಕ್ಷಾ ವಿಭಾಗಕ್ಕೆ ಸಲ್ಲಿಸಬೇಕು.
4. ಉತ್ತಮೀಕರಣ ಪರೀಕ್ಷೆಯನ್ನು ತೆಗೆದುಕೊಳ್ಳುವವರು ಖಾಲಿ ಅರ್ಜಿ ಫಾರಂನಲ್ಲಿ ಮಾಹಿತಿಯನ್ನು ನೀಡಬೇಕು ಮತ್ತು ಪ್ರತ್ಯೇಕವಾಗಿ ಅಭ್ಯರ್ಥನಾ ಪಟ್ಟಿಯನ್ನು ತಯಾರಿಸಬೇಕು.
5. ಸಂಬಂಧಪಟ್ಟ ಕಾಲೇಜು/ಸ್ನಾತಕೋತ್ತರ ಕೇಂದ್ರದ ಮುಖ್ಯಸ್ಥರುಗಳು ದಿನಂಪ್ರತಿ ಪರೀಕ್ಷೆ ಮುಗಿದ ಆ ದಿನವೇ ಉತ್ತರ ಪತ್ರಿಕೆ ಬಂಡಲ್‌ಗಳನ್ನು ಸೀಲ್ ಮಾಡಿ ಅಂಚೆ ಮೂಲಕ ಅಥವಾ ಖುದ್ದಾಗಿ ಕುಲಸಚಿವ(ಪರೀಕ್ಷಾಂಗ) ರವರ ವಿಭಾಗಕ್ಕೆ ಕಳುಹಿಸಲು ಕ್ರಮಕೈಗೊಳ್ಳುವುದು.

## <u>ಪರೀಕ್ಷಾ ಕೇಂದ್ರಗಳು ಮತ್ತು ಪರೀಕ್ಷಾ ಮುಖ್ಯ ಮೇಲ್ವಿಚಾರಕರ ಕರ್ತವ್ಯಗಳು</u>

ಈ ಮುಂದೆ ನಮೂದಿಸಿರುವಂತೆ ಪರೀಕ್ಷಾ ಕೇಂದ್ರಗಳನ್ನು ನಿಗದಿಪಡಿಸಲಾಗಿದೆ ಹಾಗೂ ಸಂಬಂಧಪಟ್ಟ ಮುಖ್ಯಸ್ಥರನ್ನು ಪರೀಕ್ಷಾ ಮುಖ್ಯ ಮೇಲ್ವಿಚಾರಕರಾಗಿ ನೇಮಿಸಲಾಗಿದೆ. ಪರೀಕ್ಷೆಗಳು ಸುಗಮವಾಗಿ ನಡೆಯಲು ಮುಖ್ಯ ಮೇಲ್ವಿಚಾರಕರು "Manual for conduct of examination" ಪ್ರಕಾರ ಕ್ರಮ ತೆಗೆದುಕೊಳ್ಳುವುದು.

1. ವ್ಯವಹಾರ ಆಡಳಿತ ಅಧ್ಯಯನ ವಿಭಾಗ, (BIMS) ಮಾನಸಗಂಗೋತ್ರಿ, ಮೈಸೂರು.
2. ಪೂಜ ಭಗವತ್ ಮೆಮೋರಿಯಲ್ ಮಹಾಜನ ಶಿಕ್ಷಣ ಕೇಂದ್ರ, ಮೇಟಗಳ್ಳಿ, ಕೆ.ಆರ್.ಎಸ್. ರಸ್ತೆ, ಮೈಸೂರು.
3. ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ವ್ಯವಹಾರ ವಿಜ್ಞಾನ ಕಾಲೇಜು, ಪಡುವರಹಳ್ಳಿ, ಮೈಸೂರು.
4. ಹೆಚ್. ಆರ್. ಉನ್ನತ ಶಿಕ್ಷಣ ಸಂಸ್ಥೆ, ಹಾಸನ.

Anand 2/8/2

ಕುಲಸಚಿವ (ಪರೀಕ್ಷಾಂಗ

**<u>ಇವರಿಗೆ:</u>**

1. ಅಧ್ಯಕ್ಷರು, ವ್ಯವಹಾರ ಆಡಳಿತ ಅಧ್ಯಯನ ವಿಭಾಗ, (BIMS) ಮಾನಸಗಂಗೋತ್ರಿ, ಮೈಸೂರು,
2. ನಿರ್ದೇಶಕರು/ಮುಖ್ಯಸ್ಥರು, ಸ್ನಾತಕೋತ್ತರ ಕೇಂದ್ರ, ಮಂಡ್ಯ ಮತ್ತು ಹಾಸನ.
3. ನಿರ್ದೇಶಕರು,ಡಾ.ಬಿ.ಆರ್.ಅಂಬೇಡ್ಕರ್, ಸ್ನಾತಕೋತ್ತರ ಕೇಂದ್ರ, ಚಾಮರಾಜನಗರ.
4. ಸಂಬಂಧಪಟ್ಟ ಎಲ್ಲಾ ಕಾಲೇಜುಗಳ/ಸಂಸ್ಥೆಗಳ ಪ್ರಾಂಶುಪಾಲರು/ಮುಖ್ಯಸ್ಥರು.
5. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು.
6. ನಿರ್ದೇಶಕರು, ವಿಶ್ವವಿದ್ಯಾನಿಲಯ ಮುದ್ರಣಾಲಯ, ಮಾನಸಗಂಗೋತ್ರಿ, ಮೈಸೂರು.
7. ಎಲ್ಲಾ ಉಪ/ಸಹಾಯಕ ಕುಲಸಚಿವರು (ಪರೀಕ್ಷಾಂಗ), ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
8. ವಿಶೇಷಾಧಿಕಾರಿಗಳು, ಪರೀಕ್ಷಾ ಸುಧಾರಣಾ ಘಟಕ, ಪರೀಕ್ಷಾ ಭವನ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
9. ಮುಖ್ಯಸ್ಥರು, ಮೆಟಾ–ಐ ಟೆಕ್ನಾಲಾಜೀಸ್ ಪ್ರೈವೇಟ್ ಲಿಮಿಟೆಡ್, ಪರೀಕ್ಷಾ ಭವನ, ಮೈವಿವಿ, ಮೈಸೂರು.
10. ಅಧೀಕ್ಷಕರು, ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
11. ಮಾನ್ಯ ಕುಲಪತಿ/ಕುಲಸಚಿವ/ ಕುಲಸಚಿವ (ಪರೀಕ್ಷಾಂಗ)/ಹಣಕಾಸು ಅಧಿಕಾರಿಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
12. ಕಾರ್ಯನಿರ್ವಾಹಕರು, ಔಟ್‌ರೀಚ್ ಸೆಂಟರ್, ಪ.ವಿ.8.7 ಮತ್ತು ಪ.ವಿ.1.7, ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು– ಸೂಕ್ತ ಕ್ರಮಕ್ಕಾಗಿ.
13. ಅಧ್ಯಕ್ಷರು, ಗಣಕ ವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು – ಈ ಅಧಿಸೂಚನೆಯನ್ನು ವಿಶ್ವವಿದ್ಯಾನಿಲಯ ವೆಬ್‌ಸೈಟ್‌ನಲ್ಲಿ Upload ಮಾಡಲು ಕೋರಿದೆ.
14. ಕಛೇರಿ ಪ್ರತಿ.